



ಅರುಣ ಪಿ. ಭಟ್ಟ

## ವಾರಭವಿಷ್ಯ: 25.07.2024ರಿಂದ 31.07.2024ರವರೆಗೆ




ನಿಮ್ಮ ಕೆಲಸದಿಂದ ವಿಶ್ವಾಸಾರ್ಹತೆ ಹೆಚ್ಚಾಗುತ್ತದೆ. ಕೆಲವರು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರಾಂತ್ಯಕ್ಕೆ ಆರೋಗ್ಯ ಉತ್ತಮವಾಗಿದ್ದು, ಸಂತೋಷವಾಗಿ ಇರುತ್ತೀರಿ. ನಿಮ್ಮ ಕೆಲಸದ ಜೊತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ಸಮಯವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಲ್ಲಿ ಯಶಸ್ಸು ಕಾಣುತ್ತೀರಿ. ಶುಭದಿನ 28. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವ್ಯವಹಾರಗಳಲ್ಲೂ ಮುಂದಿರುತ್ತೀರಿ. ಆದರೆ ವಾರದ ದ್ವಿತೀಯಾರ್ಧದಲ್ಲಿ ಕೆಲಸ ಕಾರ್ಯಗಳಲ್ಲಿ ತೊಂದರೆ ಎದುರಾಗುತ್ತದೆ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ವಿರೋಧಿ ಪಾಳಯದ ಪಿತೂರಿಯಿಂದ ಹಿನ್ನಡೆ ಅನುಭವಿಸಬೇಕಾಗುತ್ತದೆ. ಅನಾರೋಗ್ಯ ಕಾಡಬಹುದು. ಶುಭದಿನ 29. ಕಾಲಭೈರವನ ಸೇವೆ ಮಾಡಿರಿ.




ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಸಂಬಂಧಿಕರ ಜೊತೆ ಉತ್ತಮ ಸಮಯ ಕಳೆಯುವ ಸಾಧ್ಯತೆ ಇದೆ. ಉದ್ಯಮ ಮತ್ತು ವ್ಯಾಪಾರವನ್ನು ಬಹಳ ಎಚ್ಚರಿಕೆಯಿಂದ ವ್ಯವಹರಿಸಿ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ವ್ಯವಹಾರಗಳಲ್ಲಿ ನಿಮಗೆ ಅನುಕೂಲಕರ ಸನ್ನಿವೇಶ ಇರುತ್ತದೆ. ಶುಭದಿನ 30. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವಿವಾಹ ವಯಸ್ಕ ಮಗ ಅಥವಾ ಮಗಳು ಇದ್ದಲ್ಲಿ ಅವರ ಮದುವೆ ವಿಚಾರವಾಗಿ ಮಾತುಕತೆ ನಡೆಸಲಿದ್ದೀರಿ. ಈ ವಾರ ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಇದಕ್ಕಾಗಿ ಕೆಲವರ ಸಹಾಯ ಪಡೆಯುವ ಸಾಧ್ಯತೆ ಇದೆ. ಕೆಲವು ಆರೋಗ್ಯ ಸಮಸ್ಯೆಗಳು ನಿಮ್ಮನ್ನು ಕಾಡಬಹುದು. ವಾರದ ಕೊನೆ ಭಾಗವು ನಿಮಗೆ ಅನುಕೂಲ. ಶುಭದಿನ 31. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಪ್ರಯತ್ನ ಮಾಡುತ್ತೀರಿ. ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ಹಲವರ ಜೊತೆ ಏಕ ಕಾಲಕ್ಕೆ ಸಂಪರ್ಕ ಸಾಧಿಸಿ, ನಿಮ್ಮ ಕೆಲಸ ಕಾರ್ಯಗಳಿಗೆ ಬೇಕಾದ ಮಾಹಿತಿ ಕಲೆ ಹಾಕುತ್ತೀರಿ. ನಿಮ್ಮ ಸಂಗಾತಿಗೆ ಕೆಲವು ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಶುಭದಿನ 26. ಲಿಂಗಾಷ್ಟಕ ಪಠಣ ಮಾಡಿರಿ.




ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ಮೂಲಕ ವ್ಯವಹಾರವನ್ನು ಉತ್ತಮವಾಗಿ ಮಾಡುತ್ತೀರಿ. ಈ ಅವಧಿಯಲ್ಲಿ ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಈ ಅವಧಿಯಲ್ಲಿ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ನಿಮ್ಮ ಬಹುತೇಕ ಸಮಸ್ಯೆಗಳಿಗೆ ಪರಿಹಾರಗಳು ದೊರೆಯುತ್ತವೆ. ವಿರಾಮಕ್ಕೆ ನಿಮ್ಮದೇ ಸಮಯ ದೊರೆಯುತ್ತದೆ. ಶುಭದಿನ 29. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಬಹುದು. ಕೌಟುಂಬಿಕ ವಿಚಾರದಲ್ಲಿ ಪ್ರಗತಿ ಕಾಣುತ್ತದೆ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ. ಈಗ ಮಾಡುತ್ತಿರುವ ವ್ಯಾಪಾರ ವ್ಯವಹಾರ ಮತ್ತಷ್ಟು ಪರಿಣಾಮಕಾರಿಯಾಗಿ ಮಾಡುವುದಕ್ಕೆ ಅವಕಾಶ ದೊರೆಯುತ್ತದೆ. ಶುಭದಿನ 30. ಸೌಂದರ್ಯ ಲಹರಿ ಪಠಿಸಿರಿ.




ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ಮುಖ್ಯವಾದ ವ್ಯವಹಾರವೊಂದರ ಭಾಗೀದಾರರಾಗುತ್ತೀರಿ. ಭೂಮಿಯೊಂದರ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಆದರೆ ಉದ್ಯೋಗ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಾರದ ಅಂತ್ಯ ಭಾಗದಲ್ಲಿ ವರ್ಗಾವಣೆ ಆಗುವ ಸಾಧ್ಯತೆ ಇದೆ. ಕೆಲಸವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಮಾಡಲಿದ್ದೀರಿ. ಶುಭದಿನ 31. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.




ವಾರದ ಶುರುವಿನಿಂದಲೇ ವ್ಯಾಪಾರಸ್ಥರು ಉದ್ಯೋಗಸ್ಥರು ತಮ್ಮ ಉದ್ಯಮದ ಪ್ರಗತಿಯ ಪರಿಶೀಲನೆಯಲ್ಲಿ ಸಕ್ರಿಯರಾಗುತ್ತೀರಿ. ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣ ಮಾಡಲು ಹಣ ಖರ್ಚು ಮಾಡಬೇಕಾಗುತ್ತದೆ. ನಿಮ್ಮ ವಿಚಾರವನ್ನು ನೇರವಾಗಿ ಹೇಳಲು ಪ್ರಯತ್ನಿಸಿ. ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಉದ್ಯೋಗದ ಕಡೆಗೆ ನಿಮ್ಮ ಗಮನ ಹೆಚ್ಚಾಗುತ್ತದೆ. ಶುಭದಿನ 29. ವಿಷ್ಣು ಸಹಸ್ರನಾಮ ಓದಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ ಪಡೆಯುವ ಅವಕಾಶ ಇದೆ. ಇದರಿಂದ ಹೆಚ್ಚು ಉತ್ಸಾಹಭರಿತರಾಗಿ ಕಾಣಿಸಿಕೊಳ್ಳಲಿದ್ದೀರಿ. ವಿದ್ಯಾರ್ಥಿಗಳಿಗೆ ಯಶಸ್ಸು ಪಡೆಯುವ ಅವಕಾಶಗಳು ದೊರೆಯಲಿವೆ. ಕ್ರೀಡಾ ಕ್ಷೇತ್ರದಲ್ಲಿ ಇರುವವರು ಅತ್ಯುತ್ತಮ ಸಾಧನೆ ಮಾಡಲು ಅವಕಾಶ ದೊರೆಯಲಿದೆ. ಶುಭದಿನ 28. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಉದ್ಯೋಗ ಕ್ಷೇತ್ರದಲ್ಲಿ ಅದ್ಭುತ ಸಾಧನೆ ಮಾಡುವ ಅವಕಾಶಗಳಿವೆ. ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ನಿಮ್ಮ ಪೋಷಕರಿಗೆ ಹೆಚ್ಚಿನ ಗೌರವ ನೀಡುತ್ತೀರಿ. ನಿಮ್ಮ ಆದಾಯ ಉತ್ತಮವಾಗಿರುತ್ತದೆ. ಸಾಮಾಜಿಕವಾಗಿ ಗೌರವ ಮನ್ನಣೆಗಳನ್ನು ಪಡೆಯಲಿದ್ದೀರಿ. ಶುಭದಿನ 27. ಸುಬ್ರಮಣ್ಯ ಜಪ ಮಾಡಿರಿ.




ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜೊತೆ ಮಹತ್ತರವಾದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ವಿದ್ಯಾರ್ಥಿಗಳಿಗೆ ಪ್ರಗತಿ ಇದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆದಾಯದಲ್ಲಿ ಹೆಚ್ಚಳ ಆಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಮಧುರವಾದ ಕ್ಷಣಗಳನ್ನು ಅನುಭವಿಸಲಿದ್ದೀರಿ. ಶುಭದಿನ 29. ಶ್ರೀ ದುರ್ಗಾ ಆರಾಧನೆ ಮಾಡಿರಿ.